सत्यमेव जयते

**ಚುನಾವಣಾ ಜರೂರು**

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ
ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ
ನಂ.8, ಕನ್ನಿಂಗ್ ಹ್ಯಾಂ ರಸ್ತೆ.
ಬೆಂಗಳೂರು–560052 ದಿನಾಂಕ: 23-05-2018

**ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ.33.ಇಯುಬಿ.2018,**
**ಬೆಂಗಳೂರು, ದಿನಾಂಕ: 23–05–2018**

ರಾಜ್ಯ ಚುನಾವಣಾ ಆಯೋಗವು ಕೆಳಗೆ ನಮೂದಿಸಿರುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳ ವಿವಿಧ ಕಾರಣಗಳಿಂದ ತೆರವಾಗಿರುವ ಸದಸ್ಯ ಸ್ಥಾನಕ್ಕೆ ಈ ಕೆಳಗಿನ ಚುನಾವಣಾ ವೇಳಾಪಟ್ಟಿಯಂತೆ ಉಪಚುನಾವಣೆಯನ್ನು ನಡೆಸಲು ಕರ್ನಾಟಕ ಮುನಿಸಿಪಾಲಿಟೀಸ್ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977 ರ ನಿಯಮ 3(1) ರಂತೆ ಆದೇಶಿಸಿದೆ.

| ಕ್ರ.ಸಂ | ಜಿಲ್ಲೆ | ಕ್ರ. ಸಂ. | ನಗರ ಸ್ಥಳೀಯ ಸಂಸ್ಥೆಯ ಹೆಸರು | ವಾರ್ಡ್ ನಂ |
|---|---|---|---|---|
| 01 | ಬೆಂಗಳೂರು ಗ್ರಾಮಾಂತರ | 1 | ದೊಡ್ಡಬಳ್ಳಾಪುರ ನಗರಸಭೆ | 22 |
| 02 | ಕೋಲಾರ | 2 | ಶ್ರೀನಿವಾಸಪುರ ಪುರಸಭೆ | 12 |
| | | 3 | ರಾಬರ್ಟ್‌ಸನ್‌ಪೇಟ್ ನಗರಸಭೆ (ಕೆ.ಜಿ.ಎಫ್) | 17 |
| 03 | ತುಮಕೂರು | 4 | ಕುಣಿಗಲ್ ಪುರಸಭೆ | 05 |
| 04 | ಶಿವಮೊಗ್ಗ | 5 | ಸಾಗರ ನಗರಸಭೆ | 25 |
| 05 | ಬೆಳಗಾವಿ | 6 | ಬೋರಗಾಂವ ಪಟ್ಟಣ ಪಂಚಾಯತಿ | 08 |
| 06 | ವಿಜಯಪುರ | 7 | ಮನಗೂಳಿ ಪಟ್ಟಣ ಪಂಚಾಯತಿ | 07 |
| 07 | ಬೀದರ್ | 8 | ಬೀದರ್ ನಗರಸಭೆ | 22 |

## ಚುನಾವಣಾ ವೇಳಾ ಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿ ರವರು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 30-05-2018 ಬುಧವಾರ |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 06-06-2018 ಬುಧವಾರ |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 07-06-2018 ಗುರುವಾರ |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 09-06-2018 ಶನಿವಾರ |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸ ಬೇಕಾದ ದಿನಾಂಕ ಮತ್ತು ದಿನ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | 17-06-2018 ಭಾನುವಾರ |

23/5/2018.

| | | |
|---|---|---|
| 6 | ಮರು ಮತದಾನ ಇದ್ದಲ್ಲಿ ಮತದಾನದ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | 18-06-2018 ಸೋಮವಾರ |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ ಬೆಳಿಗ್ಗೆ 8.00 ಘಂಟೆಯಿಂದ ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ | 19-06-2018 ಮಂಗಳವಾರ |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 19-06-2018 ಮಂಗಳವಾರ |

ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಮುನಿಸಿಪಾಲಿಟೀಸ್ (ಎಲೆಕ್ಷನ್ ಆಫ್ ಕೌನ್ಸಿಲರ್ಸ್) ನಿಯಮಗಳು 1977 ರ ನಿಯಮ 8 ರ ಪ್ರಕಾರ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಿಗೆ ಸಂಬಂಧಿಸಿದ ಚುನಾವಣಾ ಅಧಿಸೂಚನೆಯನ್ನು ಫಾರಂ ನಂ.1ರಲ್ಲಿ ಹೊರಡಿಸತಕ್ಕದ್ದು. ಹಾಗೆ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿತ ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿ ಕಛೇರಿ, ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಇ–ಮೇಲ್ ಮೂಲಕ ಕಳುಹಿಸುವುದು.

ಅಧಿಸೂಚನೆಯ ಪ್ರತಿಯೊಂದಿಗೆ ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ–1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು ಹಾಗೂ ಚುನಾವಣೆ ಪ್ರಕ್ರಿಯೆಯನ್ನು ಪ್ರಕಟಿಸುವಂತೆ ಸೂಚಿಸುವುದು. ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆ ಹೆಸರು, ವಾರ್ಡುಗಳ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು. ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು. ಚುನಾವಣಾಧಿಕಾರಿ/ ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಿಸಿ ನೇಮಕಾತಿ ಆದೇಶದ ಪ್ರತಿಯನ್ನು ಆಯೋಗಕ್ಕೆ ಕಳುಹಿಸುವುದು.

ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡ್ ವ್ಯಾಪ್ತಿಯಲ್ಲಿ ಚುನಾವಣಾ ನೀತಿ ಸಂಹಿತೆಯು ದಿನಾಂಕ: 30-05-2018 ರಿಂದ ಜಾರಿಗೆ ಬರಲಿದ್ದು, ದಿನಾಂಕ: 19-06-2018 ರವರೆಗೆ ಜಾರಿಯಲ್ಲಿರುತ್ತದೆ. ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳತಕ್ಕದ್ದು.

ಆದೇಶಾನುಸಾರ

23/5/2018.

(ಎಸ್.ಉಮೇಶ)

ಅಧೀನ ಕಾರ್ಯದರ್ಶಿ

ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಇವರಿಗೆ

1. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಜಿಲ್ಲಾಧಿಕಾರಿಗಳು ಬೆಂಗಳೂರು ಗ್ರಾಮಾಂತರ, ಶಿವಮೊಗ್ಗ, ತುಮಕೂರು, ಬೀದರ್, ಬೆಳಗಾವಿ, ಕೋಲಾರ ಹಾಗೂ ವಿಜಯಪುರ ಜಿಲ್ಲೆ.
3. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಈ ಆದೇಶವನ್ನು ಈ ದಿನವೇ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಕಳುಹಿಸಿಕೊಡುವುದು.